## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 434 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಕಾರಂಜ ಮುಳುಗಡೆ ಪ್ರದೇಶದ ಅನ್ನದಾತರು ಪರಿಹಾರಕ್ಕೆ ಒತ್ತಾಯಿಸಿ ಸುಮಾರು 80 ದಿವಸಗಳಿಂದ ಜಿಲ್ಲಾಧಿಕಾರಿ ಕಛೇರಿ ಎದುರು ಧರಣಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ ಜಿಲ್ಲೆಯಲ್ಲಿ ಕಾರಂಜಾ ಮುಳುಗಡೆ ಪ್ರದೇಶದ ರೈತರು ಪರಿಹಾರಕ್ಕೆ ಒತ್ತಾಯಿಸಿ ಸುಮಾರು 80 ದಿವಸಗಳಿಂದ ಜಿಲ್ಲಾಧಿಕಾರಿ ಕಛೇರಿ ಎದರು ಧರಣಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಅನ್ನದಾತರ ಸಮಸ್ಯೆ (ಪರಿಹಾರ) ಬಗೆಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಸದರಿ ರೈತರಿಗೆ ಈಗಾಗಲೇ ಸರ್ಕಾರದಿಂದ ನಿಗದಿ ಪಡಿಸಲಾದ ಭೂಸ್ವಾಧೀನ ಕಾಯ್ದೆಗಳ ಮಾರ್ಗಸೂಚಿಗಳ ಅನುಗುಣವಾಗಿ ಆಯಾ ಹಂತಗಳಲ್ಲಿ ಪರಿಹಾರ ಒದಗಿಸಲಾಗಿರುತ್ತದೆ. ಕಾರಂಜಾ ಯೋಜನೆಯಡಿಯಲ್ಲಿ ಭೂಸ್ವಾಧೀನಗೊಂಡ ಎಲ್ಲಾ ರೈತರುಗಳಿಗೆ ಭೂಸ್ವಾಧೀನ ಕಾಯ್ದೆ ಪ್ರಕಾರ ಅವಾರ್ಡನ್ನು ಮಂಜೂರು ಮಾಡಿ ಪರಿಹಾರ ಧನವನ್ನು ವಿತರಿಸಲಾಗಿದೆ ಮತ್ತು ಕೆಲವು ರೈತರುಗಳು ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಹೆಚ್ಚುವರಿ ಪರಿಹಾರ ಧನಕ್ಕಾಗಿ ಭೂಸ್ವಾಧೀನ ಕಾಯ್ದೆ 1864 ರ ಕಲಂ 18(1) ರ ನಿಗಧಿತ 6 ತಿಂಗಳ ಅವಧಿಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಾದ ಅರ್ಜಿಗಳನ್ನು ಪುರಸ್ಕರಿಸಿ ನ್ಯಾಯಾಲಯದ ಆದೇಶದನ್ವಯ ಹೆಚ್ಚುವರಿ ಪರಿಹಾರವನ್ನು ವಿತರಿಸಲಾಗಿದೆ.<br><br>ಅದೇ ಅಧಿಸೂಚನೆಯಲ್ಲಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಾಗದ ರೈತರು 3 ತಿಂಗಳ ಅವಧಿಯಲ್ಲಿ SLAO ರವರಿಗೆ ಭೂಸ್ವಾಧೀನ ಕಾಯ್ದೆ 1864 ಕಲಂ 28 (ಎ) ರಡಿಯಲ್ಲಿ ಈ ಮೇಲೆ ನ್ಯಾಯಾಲಯ ನೀಡಿರುವ ಹೆಚ್ಚುವರಿ ಪರಿಹಾರಕ್ಕಾಗಿ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ. ಆದರೆ ಬಾಕಿ ಉಳಿದ ರೈತರು 18 (1)ರ ರಡಿಯಲ್ಲಿ ನ್ಯಾಯಾಲಯಕ್ಕೆ ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಿರುವುದಿಲ್ಲ ಮತ್ತು ಕಲಂ 28 (ಎ)ರಡಿ SLAO ರವರಿಗೆ ನಿಗದಿತ ಮೂರು ತಿಂಗಳು ಅವಧಿಯೊಳಗೆ ಅರ್ಜಿಯನ್ನು ಸಲ್ಲಿಸಿರುವುದಿಲ್ಲ. ಆದುದರಿಂದ ಇಂತಹ ರೈತರಿಗೆ ಹೆಚ್ಚುವರಿ ಪರಿಹಾರವನ್ನು ಭೂಸ್ವಾಧೀನ ಕಾಯ್ದೆ 1864 ಕಲಂ 18 (1) ಹಾಗೂ 28 (ಎ) ರಡಿ ಅವಕಾಶವಿರುವುದಿಲ್ಲವಾದುದರಿಂದ ಧರಣಿ ನಿರತ ರೈತರಿಗೆ ಹೆಚ್ಚುವರಿ ಪರಿಹಾರ ನೀಡಲಾಗಿರುವುದಿಲ್ಲ. |

| | | |
|---|---|---|
| (ಇ) | ಈ ಸಂತ್ರಸ್ಥರು ಸುಮಾರು ೮೦ ದಿವಸಗಳಿಂದ ಧರಣಿ ನಡೆಸುತ್ತಿದ್ದರೂ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲದಿರುವುದಕ್ಕೆ ಕಾರಣಗಳೇನು? (ವಿವರ ನೀಡುವುದು) | ಸದರಿ ರೈತರಿಗೆ ಕಾನೂನು ರೀತಿ ನೀಡಬೇಕಾದ ಭೂ ಪರಿಹಾರವನ್ನು ಈಗಾಗಲೇ ನೀಡಲಾಗಿರುತ್ತದೆ. ಈಗ ಸಲ್ಲಿಸಿರುವ ರೈತರ ಬೇಡಿಕೆಗಳಿಗೆ ಪ್ರತಿಕ್ರಿಯೆಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

ಜಸಂಇ 143 ಎಂಎಲ್ಎ 2022

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು

**ಅನುಬಂಧ**

**ಸಂತ್ರಸ್ತರ ಪ್ರಸ್ತುತ ಬೇಡಿಕೆಗಳು ಮತ್ತು ಇಲಾಖೆಯ ಪ್ರತಿಕ್ರಿಯೆ**

ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ, ಬೀದರ್ ರವರು ಜಿಲ್ಲಾಧಿಕಾರಿಗಳ ಕಛೇರಿ, ಬೀದರ್ ಇಲ್ಲಿ ಕಾರಂಜಾ ಜಲಾಶಯದಲ್ಲಿ ಭೂಮಿ ಮತ್ತು ಮನೆಗಳನ್ನು ಕಳೆದುಕೊಂಡಿವರಿಗೆ ನ್ಯಾಯಯುತ ಬೆಲೆ ನೀಡಲು ಒತ್ತಾಯಿಸಿ, ಧರಣಿ ಸತ್ಯಾಗ್ರಹ ನಡೆಸುತ್ತಿದ್ದು ಈ ಕೆಳಕಂಡ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿರುತ್ತಾರೆ.

| ಸಂತ್ರಸ್ತರ ಬೇಡಿಕೆ | ಇಲಾಖೆಯ ಪ್ರತಿಕ್ರಿಯೆ |
|---|---|
| ಕಾರಂಜಾ ಜಲಾಶಯದಲ್ಲಿ ಭೂಮಿ ಕಳೆದುಕೊಂಡವರಿಗೆ ವೈಜ್ಞಾನಿಕ ದರ 1 ಎಕರೆಗೆ ಸುಮಾರು 20 ಲಕ್ಷ ಪರಿಹಾರ ಧನ ನೀಡಬೇಕು, | ಭೂಸ್ವಾಧೀನ ಕಾಯ್ದೆಯ ಅನುಗುಣವಾಗಿ ಪರಿಹಾರ ಧನವನ್ನು ವಿತರಿಸಲಾಗಿದೆ. ಹೆಚ್ಚುವರಿ ಪರಿಹಾರ ಧನಕ್ಕಾಗಿ ಬಾಕಿ ಇರುವ ಪ್ರಕರಣಗಳನ್ನು ಮಾನ್ಯ ಸಿವಿಲ್ ನ್ಯಾಯಾಲಯದ ಆದೇಶಗಳಂತೆ ವಿತರಿಸಲಾಗುತ್ತಿದ್ದು ಹಾಗೂ ಈ ಮುಂದೆ ನ್ಯಾಯಾಲಯದ ಆದೇಶದನ್ವಯ ವಿತರಿಸಲಾಗುವುದು. |
| ಒನ್ ಟೈಮ್ ಸೆಟಲ್‌ಮೆಂಟ್ ಮೂಲಕ ಕಾರಂಜಾ ಸಂತ್ರಸ್ಥರ ಬೇಡಿಕೆಯನ್ನು ಶೀಘ್ರ ಇತ್ಯಾರ್ಥಗೊಳಿಸಬೇಕು. | ಒನ್ ಟೈಮ ಸೆಟಲ್‌ಮೆಂಟ್ ಮಾಡಲು ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಅವಕಾಶವಿರುವುದಿಲ್ಲ ಮತ್ತು 18 (1) ರೆಫರೆನ್ಸ ಮತ್ತು 28 (ಎ) ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಿದವರಿಗೆ ಪರಿಹಾರ ನೀಡಲಾಗಿದೆ. |
| ಕರ್ನಾಟಕ ರಾಜ್ಯದಲ್ಲಿ ಬೆಳಗಾಂವ ಜಿಲ್ಲೆಯ ಹಿಡಕಲ್ ಜಲಾಶಯದಲ್ಲಿ ಮುಳುಗಡೆಯಾದ ಸಂತ್ರಸ್ತರ ರೈತರಿಗೆ 4 ಎಕರೆ ಜಮೀನು ಹಾಗೂ ಜಮೀನು ಕಬ್ಜಾ ಇದ್ದ ರೈತರಿಗೆ 2 ಎಕರೆ ಭೂಮಿ ಸರ್ಕಾರದಿಂದ ಉಚಿತವಾಗಿ ನೀಡಲಾಗಿದೆ. ಅದೇ ರೀತಿ ಹೇಮಾವತಿ ಜಲಾಶಯದಲ್ಲಿ ಪ್ಯಾಕೇಜ್ ಪ್ರಕಾರ 1 ರಿಂದ 2 ಎಕರೆ ಜಮೀನು ರೈತರಿಗೆ ಉಚಿತವಾಗಿ ನೀಡಲಾಗಿದೆ. ಅದೇ ರೀತಿಯಾಗಿ ಕಾರಂಜಾ ಜಲಾಶಯದಲ್ಲಿ ಮುಳುಗಡೆಯಾಗಿ ಭೂಮಿ ಕಳೆದುಕೊಂಡ ಪ್ರತಿಯೊಬ್ಬ ಸಂತ್ರಸ್ತ ರೈತರಿಗೂ 4 ಎಕರೆ 20 ಗುಂಟೆ ಜಮೀನು ಸರ್ಕಾರದಿದ ಉಚಿತವಾಗಿ ನೀಡಬೇಕು. | ಭೂಸ್ವಾಧೀನ ಕಾಯ್ದೆ 1864 ಅಡಿಯಲ್ಲಿ ಅವಕಾಶವಿರುವುದಿಲ್ಲ |
| ಪ್ರತಿ ಕುಟುಂಬಕ್ಕೆ ಜೀವನ ನಿರ್ವಹಣೆಗೆ ಮಾಸಿಕ ಪರಿಹಾರ ರೂ. 50,000/- ಪ್ರತಿ ವ್ಯಕ್ತಿಗೆ ರೂ. 10,000/-ನೀಡಬೇಕು. | ಭೂಸ್ವಾಧೀನ ಕಾಯ್ದೆ 1864 ಅಡಿಯಲ್ಲಿ ಅವಕಾಶವಿರುವುದಿಲ್ಲ |
| ಕುಟುಂಬದ ಎಲ್ಲಾ ಸದಸ್ಯರಿಗೆ ವೈದ್ಯಕೀಯ ಚಿಕಿತ್ಸೆಯನ್ನು ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಸಂಪೂರ್ಣ ಉಚಿತವಾಗಿ ದೊರೆಯುವಂತೆ ಸ್ಮಾರ್ಟ್ ಕಾರ್ಡ್ ನೀಡಬೇಕು | ಸರ್ಕಾರದ ಆರೋಗ್ಯ ಇಲಾಖೆಯಲ್ಲಿ ಸಾರ್ವಜನಿಕ ಅವಕಾಶ ಇರುವ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳು ಸಂತ್ರಸ್ತರಿಗೆ ಸಹ ಅನ್ವಯಿಸುತ್ತದೆ. |

| | |
|---|---|
| ಕುಟುಂಬದ ಒಬ್ಬ ಸದಸ್ಯನಿಗೆ ಅರ್ಹತೆಯ ಆಧಾರದ ಮೇಲೆ ಕಡ್ಡಾಯವಾಗಿ ಸರ್ಕಾರಿ ಹುದ್ದೆಯನ್ನು ನೀಡಬೇಕು. | ಭೂಸ್ವಾಧೀನ ಕಾಯ್ದೆ 1864 ಅಡಿಯಲ್ಲಿ ಅವಕಾಶವಿರುವುದಿಲ್ಲ ಆದರೆ ಭೂಮಿ ಕಳೆದುಕೊಂಡ ಕುಟುಂಬದವರಿಗೆ ಯೋಜನೆ ನಿರಾಶ್ರಿತ ಪ್ರಮಾಣ ಪತ್ರ ನೀಡಲಾಗುತ್ತಿದೆ |
| ರೈತರಿಗೆ ಗೃಹೋಪಯೋಗಿ ಉಚಿತ ವಿದ್ಯುತ್ ನೀಡಬೇಕು ಹಾಗೂ ಅಂತ್ಯೋದಯ ಪಡಿತರ ಚೀಟಿಯನ್ನು ನೀಡಬೇಕು. | ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಅವಕಾಶವಿರುವುದಿಲ್ಲ |
| ರೈತರ ಮಕ್ಕಳಿಗೆ ಎಲ್ಲಾ ಹಂತಗಳಲ್ಲಿ ಉಚಿತ ಶಿಕ್ಷಣವನ್ನು ನೀಡಬೇಕು. | ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಅವಕಾಶವಿರುವುದಿಲ್ಲ |
| ಕಾರಂಜಾ ನೀರನ್ನು ಉಪಯೋಗಿಸುವವರಿಂದ ಪಡೆದ ಕರ ಶುಲ್ಕದಲ್ಲಿ ಶೇ. 50% ರಷ್ಟನ್ನು ಸಂತ್ರಸ್ತ ರೈತರಿಗೆ ನಿಡಬೇಕು. | ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಅವಕಾಶವಿರುವುದಿಲ್ಲ |
| ಭೂಸ್ವಾಧೀನ ಪಡಿಸಿಕೊಂಡ ಹೆಚ್ಚುವರಿ ಜಮೀನಿಗೆ ಎಕರೆಗೆ 50.00 ಲಕ್ಷ ಪರಿಹಾರ ಧನ ನೀಡಬೇಕು. | ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಅವಕಾಶವಿರುವುದಿಲ್ಲ |

*****